**ಸಾಕ್ಷಿಯನ್ನು ಕರೆಸಲಾಯಿತು.** **ಪ್ರಮಾಣ ವಚನ ಮಾಡಿಸಲಾಯಿತು.**

ದಿಃ **01-08-2026**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಪಿ ಎನ್ ವಕೀಲರಿಂದ**

ನಾನು ಈ ಅರ್ಜಿಯಲ್ಲಿ ಅರ್ಜಿದಾರ ಇರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ.

1. ದಿನಾಂಕಃ 29.05.2026 ರ ಅಲಭ್ಯ ಪ್ರಮಾಣ ಪತ್ರವನ್ನು ನಿ.ಪಿ.-1ಎಂದು ಗುರುತಿಸಲಾಯಿತು.
2. ವಂಶವೃಕ್ಷ ಪ್ರಮಾಣಪತ್ರವನ್ನು ನಿ.ಪಿ.-2 ಎಂದು ಗುರುತಿಸಲಾಯಿತು.
3. ಸರ್ವೆ ನಂಬರ್ **25** ರ ಪಹಣಿಯನ್ನು ನಿ.ಪಿ.-3 ಎಂದು ಗುರುತಿಸಲಾಯಿತು.
4. ಅರ್ಜಿದಾರರ ಆಧಾರ್ ಕಾರ್ಡನ್ನು ನಿ.ಪಿ.-4 ಎಂದು ಗುರುತಿಸಲಾಯಿತು. (ನಿ.ಪಿ-4 ದಾಖಲಾತಿ ದೈನಂದಿನ ಚಟುವಟಿಕೆಗೆ ಅವಶ್ಯಕತೆ ಇರುವುದರಿಂದ ಪ್ರತಿಯನ್ನು ಪಡೆದು ಮೂಲ ದಾಖಲಾತಿಯನ್ನು ಸಾಕ್ಷಿಗೆ ಹಿಂದಿರುಗಿಸಲಾಗಿದೆ. )
5. ದಿಃ 26.06.2026 ರ ಎರಡು ಪತ್ರಿಕಾ ಪ್ರಕಟಣೆಗಳನ್ನು ನಿ.ಪಿ 5 ಮತ್ತು 6 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಎದುರುದಾರರು ಏಕ ಪಕ್ಷಿಯವಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಓ ಹೆ ಕೇ ಸ ಇ**

**ಸಹಿ/-**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಸಕಲೇಶಪುರ**